ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 22/3/2021

# ‘ಬಿಎಸ್‌ವೈ ಬಿಟ್ಟರೆ ಬಿಜೆಪಿ ಇಲ್ಲ’

ಪ್ರಜಾವಾಣಿ ವಾರ್ತೆ 22-3-21

ಮೈಸೂರು: ‘ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರನ್ನು ಬದಲಿಸಿದರೆ ಬಿಜೆಪಿಗೆ ಭವಿಷ್ಯವಿಲ್ಲ’ ಎಂದು ಕಾಂಗ್ರೆಸ್ ಮುಖಂಡ ಕೆ.ಎಚ್.ಮುನಿಯಪ್ಪ ಭಾನುವಾರ ಇಲ್ಲಿ ಹೇಳಿದರು.

ಪಂಚ ರಾಜ್ಯಗಳ ಚುನಾವಣೆ ಬಳಿಕ ಯಡಿಯೂರಪ್ಪ ಬದಲಾವಣೆ ಆಗಲಿದೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ‘ಯಡಿಯೂರಪ್ಪ ಹೊರತುಪಡಿಸಿದ ಬಿಜೆಪಿಯನ್ನು ಊಹಿಸಿಕೊಳ್ಳಲೂ ಸಾಧ್ಯವಿಲ್ಲ. ಬಿಜೆಪಿಗೆ ಅಸ್ತಿತ್ವವೂ ಇರಲ್ಲ’ ಎಂದರು.



ಮುನಿಯಪ್ಪ

‘ಜನಸಂಖ್ಯೆ ಆಧಾರದಲ್ಲಿ ಒಳ ಮೀಸಲಾತಿ ನಿಗದಿಯಾಗಬೇಕು. ಮೀಸಲಾತಿಯ ಹೋರಾಟ ಇದೀಗ ರಾಜಕೀಯ ತಿರುವು ಪಡೆದಿದೆ. ಯಡಿಯೂರಪ್ಪ ಬಸವ ಅನುಯಾಯಿ ಆಗಿದ್ದರೆ, ಮೊದಲು ಹಿಂದುಳಿದ ವರ್ಗಗಳ ಆಯೋಗ ನೀಡಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ (ಜಾತಿ ಗಣತಿ) ವರದಿ ಹಾಗೂ ನ್ಯಾ.ಎ.ಜೆ. ಸದಾಶಿವ ಆಯೋಗದ ವರದಿಯನ್ನು ಸಚಿವ ಸಂಪುಟ ಸಭೆಯಲ್ಲಿ ಅಂಗೀಕರಿಸಿ, ಸಾರ್ವಜನಿಕ ಚರ್ಚೆಗೆ ಅವಕಾಶ ಮಾಡಿಕೊಡಲಿ’ ಎಂದು ಆಗ್ರಹಿಸಿದರು.

ಸಿದ್ದರಾಮಯ್ಯ ಒಬ್ಬರೇ ಅಲ್ಲ: ‘ಮುಂದಿನ ಮುಖ್ಯಮಂತ್ರಿ ಅಭ್ಯರ್ಥಿ ರೇಸ್‌ನಲ್ಲಿ ಸಿದ್ದರಾಮಯ್ಯ ಒಬ್ಬರೇ ಇಲ್ಲ. ಹಿರಿಯರಾದ ಮಲ್ಲಿಕಾರ್ಜುನ ಖರ್ಗೆ, ಡಾ.ಜಿ.ಪರಮೇಶ್ವರ, ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವರಿದ್ದಾರೆ. ಮುಖ್ಯಮಂತ್ರಿ ಯಾರಾಗಬೇಕು ಎಂಬುದನ್ನು ಹೈಕಮಾಂಡ್ ನಿರ್ಧರಿಸಲಿದೆ’ ಎಂದು ತಿಳಿಸಿದರು.

‘ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲಲಿದೆ. ಬಿಜೆಪಿಯವರು ಕೋವಿಡ್‌ನಲ್ಲೂ ಭ್ರಷ್ಟಾಚಾರದ ಮೂಲಕ ಲೂಟಿ ಹೊಡೆದ ದುಡ್ಡು ಚೆಲ್ಲಿ ಗೆಲುವಿಗೆ ಮುಂದಾಗಲಿದ್ದಾರೆ. ಜನರು ವಾಸ್ತವ ಅರ್ಥ ಮಾಡಿಕೊಂಡು ವೋಟ್ ಹಾಕಬೇಕು’ ಎಂದರು.